ಕರ್ನಾಟಕ ಸರ್ಕಾರ

ಸಂಖ್ಯೆ: ಪಿಡಿ 5 ಐಎಂಎಂ 2002 ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ
ಬೆಂಗಳೂರು, ದಿನಾಂಕ: 15.02.2002

ಸುತ್ತೋಲೆ

ವಿಷಯ : ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕೆ.ಡಿ.ಪಿ ಸಭೆಗಳಲ್ಲಿ ಅಧಿಕಾರಿಗಳ ಗೈರು ಹಾಜರಿ, ಪ್ರಗತಿಯ ವರದಿಯನ್ನು ಸಲ್ಲಿಸದಿರುವುದು ಹಾಗೂ ಅನುಸರಣಾ ವರದಿಯನ್ನು ಸಲ್ಲಿಸದಿರುವ ಬಗ್ಗೆ.

ಉಲ್ಲೇಖ : ಮುಖ್ಯ ಕಾರ್ಯದರ್ಶಿಯವರ ಸುತ್ತೋಲೆ ಸಂಖ್ಯೆ: ಯೋಇ 606 ಯೋವಿವಿ 97, ದಿನಾಂಕ: 03.11.1997

ಜಿಲ್ಲಾ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಮಟ್ಟದ ಕೆ.ಡಿ.ಪಿ ಸಭೆಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಾಗದೇ ತಮ್ಮ ಅಧೀನದಲ್ಲಿ ಬರುವ ಅಧಿಕಾರಿಗಳನ್ನು ನಿಯೋಜಿಸುತ್ತಿದ್ದಾರೆ ಎಂದು ಹಲವಾರು ಸಚಿವರುಗಳು ಮಾನ್ಯ ಮುಖ್ಯ ಮಂತ್ರಿಯವರಿಗೆ ದೂರನ್ನಿತ್ತಿದ್ದಾರೆ. ಇದಲ್ಲದೆ ಜಿಲ್ಲಾ ಮಟ್ಟದ ಅಧಿಕಾರಿಗಳು ಈ ಸಭೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರುಗಳು ನೀಡುವ ಸೂಚನೆಗಳನ್ನು ಪಾಲಿಸುತ್ತಿಲ್ಲವೆಂದೂ ಸಹ ಅವರುಗಳು ದೂರನಿತ್ತಿದ್ದಾರೆ. ಸಂಬಂಧಪಟ್ಟ ಎಲ್ಲಾ ಜಿಲ್ಲಾ ಇಲಾಖೆಗಳ: ಸಂಸ್ಥೆಗಳ ಮುಖ್ಯಸ್ಥರುಗಳು ಜಿಲ್ಲಾ ಮಟ್ಟದ ಕೆ.ಡಿ.ಪಿ ಸಭೆಗಳಿಗೆ ತಮ್ಮ ಅಧೀನದಲ್ಲಿ ಬರುವ ಅಧಿಕಾರಿಗಳನ್ನು ನಿಯೋಜಿಸದೆ ತಾವೇ ಖುದ್ದಾಗಿ ಹಾಜರಗಬೇಕೆಂದು ಹಾಗೂ ಈ ಸಭೆಗಳಲ್ಲಿ ತೆಗೆದುಕೊಂಡ ನಿರ್ಣಯಗಳ ಮೇಲೆ ಕ್ರಮ ಕೈಗೊಂಡ ವರದಿಗಳನ್ನು ಸಲ್ಲಿಸಬೇಕೆಂದು ಈಗಾಗಲೇ ಸರ್ಕಾರವು ಹಿಂದೆ ಅದರಲ್ಲೂ ನಿರ್ದಿಷ್ಟವಾಗಿ ಉಲ್ಲೇಖದಲ್ಲಿನ ಸುತ್ತೋಲೆಯಲ್ಲಿ ಕಟ್ಟುನಿಟ್ಟಾದ ಸೂಚನೆಗಳನ್ನು ನೀಡಿದ್ದರೂ ಸಹ, ಜಿಲ್ಲಾ ಮಟ್ಟದ

ಇಲಾಖೆಗಳ: ಸಂಸ್ಥೆಗಳ ಮುಖ್ಯಸ್ಥರುಗಳು ಈ ಸೂಚನೆಗಳನ್ನು ಪಾಲಿಸದಿರುವುದು ಒಂದು ಗಂಭಿರವಾದ ಲೋಪದೋಷವೆಂದು ಪರಿಗಣಿಸಲಾಗಿದೆ. ಉಲ್ಲೇಖದಲ್ಲಿನ ಸುತ್ತೋಲೆಯಲ್ಲಿನ ಸೂಚನೆಗಳನ್ವಯ (i) ಸದಸ್ಯ ಕಾರ್ಯದರ್ಶಿಗಳಾಗಿ ಈ ಸಭೆಗಳನ್ನು ಕರೆಯುವ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಆಡಳಿತ ನಿಯಂತ್ರಣದಲ್ಲಿ ಬರುವ ಮೇಲೆ ತಿಳಿಸಿರುವ ಲೋಪದೋಷಗಳನ್ನು ಎಸಗಿದ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಂಡಿದ್ದ ಪಕ್ಷದಲ್ಲಿ ಅಂತಹ ಅಧಿಕಾರಿಗಳಿಂದ ಮೇಲೆ ತಿಳಿಸಿರುವ ಲೋಪದೋಷಗಳು ಮರುಕಳಿಸುತ್ತಿರಲಿಲ್ಲ. (ii) ಮುಂದುವರೆಯುತ್ತಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆಡಳಿತ ನಿಯಂತ್ರಣಕ್ಕೆ ಬರೆದಿರುವ ಮೇಲೆ ತಿಳಿಸಿರುವ ಲೋಪದೋಷಗಳನ್ನು ಎಸಗಿದ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗ ಬಗ್ಗೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವಿಭಾಗಾಧಿಕಾರಿಗಳ ನೆರವನ್ನು ಪಡೆದು ಅಂತಹ ಜಿಲ್ಲಾ ಮಟ್ಟದ ಅಧಿಕಾರಿಗಳ ಸೇವೆಯನ್ನು ನಿಯಂತ್ರಿಸುವ ನಿಯಂತ್ರಣಾಧಿಕಾರಿಗಳನ್ನು ಒತ್ತಾಯಿಸಿ, ನಿಯಂತ್ರಣಾಧಿಕಾರಿಗಳು ಅಂತಹ ಜಿಲ್ಲಾ ಮಟ್ಟದ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಂಡಿದ್ದರೆ, ಅಂತಹ ಜಿಲ್ಲಾ ಮಟ್ಟದ ಅಧಿಕಾರಿಗಳಿಂದ ಮೇಲೆ ತಿಳಿಸಿದ ಲೋಪದೋಷಗಳು ಮರುಕಳಿಸುತ್ತಿರಲಿಲ್ಲ.

2. ಆದ್ದರಿಂದ ಎಲ್ಲಾ ಜಿಲ್ಲಾ ಮಟ್ಟದ ಸಬಂದಪಟ್ಟ ಇಲಾಖೆಗಳ : ಸಂಸ್ಥೆಗಳ ಮುಖ್ಯಸ್ಥರಗಳು ಇನ್ನು ಮುಂದೆ ಜಿಲ್ಲಾ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಮಟ್ಟದ ಕೆ.ಡಿ.ಪಿ ಸಭೆಗಳಿಗೆ ತಮ್ಮ ಅಧೀನದಲ್ಲಿರುವ ಅಧಿಕಾರಿಗಳನ್ನು ನಿಯೋಜಿಸದೇ ತಾವೇ ಖುದ್ದಾಗಿ ಹಾಜರಾಗಬೇಕೆಂದು ಸರ್ಕಾರವು ಈ ಮೂಲಕ ನಿರ್ದೇಶಿಸಿದೆ. ಒಂದು ವೇಳೆ ಅನಿವಾರ್ಯ ಕಾರಣಗಳಂದ ಅವರುಗಳು ಸಭೆಗೆ ಖುದ್ದಾಗಿ ಹಾಜರಾಗಲು ಸಾಧ್ಯವಿಲ್ಲದ ಪಕ್ಷದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಗಮನಕ್ಕೆ ತಂದು, ಜಿಲ್ಲಾ ಉಸ್ತುವಾರಿ ಸಚಿವರುಗಳ ಪೂರ್ವಾನುಮತಿಯನ್ನು ಪಡೆದು ತಮ್ಮ ಹಿರಿಯ ಅಧಿಕಾರಿಗಳನ್ನು ಈ ಸಭೆಗಳಿಗೆ ಹಾಜರಾಗಲು ನಿಯೋಜಿಸತಕ್ಕದ್ದು. ಇದಲ್ಲದೆ, ಅವರುಗಳು ಈ ಸಭೆಗಳಲ್ಲಿ ಜಿಲ್ಲಾ ಉಸ್ತವಾರಿ ಸಚಿವರುಗಳು ನೀಡುವ ಸೂಚನೆಗಳನ್ನು ಸಕಾಲದಲ್ಲಿ ಪಾಲಿಸುವುದು. ಒಂದು ವೇಳೆ ಜಿಲ್ಲಾ ಉಸ್ತುವಾರಿ ಸಚಿವರುಗಳು

ನೀಡುವ ಸೂಚನೆಗಳನ್ನು ಪಾಲಿಸಲು ನೈಜವಾದ ತೊಂದರೆಗಳಿದ್ದ ಪಕ್ಷದಲ್ಲಿ ಅಂತಹ ಸೂಚನೆಗಳನ್ನು ಕೂಡಲೇ ಅವರುಗಳು ತಮ್ಮ ಹಿರಿಯ ಅಧಿಕಾರಿಗಳ ಗಮನಕ್ಕೆ ತರುವುದು ಹಾಗೂ ಅವರುಗಳು ಅಂತಹ ಸೂಚನೆಗಳ ಮೇಲೆ ತಮ್ಮ ಹಿರಿಯ ಅಧಿಕಾರಿಗಳಿಂದ ಕ್ರಮ ಕೈಗೊಂಡ ವರದಿಗಳನ್ನು ಬೇಗನೆ ಪಡೆದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮುಂದಿನ ಸಭೆಗೆ ಮಂಡಿಸಲು ಅನುವು ಆಗುವಂತೆ ನೋಡಿಕೊಳ್ಳಬೇಕು. ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಆಡಳಿತ ನಿಯಂತ್ರಣದಲ್ಲಿ ಬರುವ ಮೇಲಿನ ಸೂಚನೆಗಳನ್ನು ಪಾಲಿಸಲು ವಿಫಲರಾದ ಜಿಲ್ಲಾ ಮಟ್ಟದ ಅಧಿಕಾರಿಗಳ ಮೇಲೆ ಕೂಡಲೇ ಶಿಸ್ತಿನ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆಡಳಿತಾತ್ಮಕ ನಿಯಂತ್ರಣಕ್ಕೆ ಬರದೆ ಮೇಲಿನ ಸೂಚನೆಗಳನ್ನು ಪಾಲಿಸದೇ ಇರುವ ಜಿಲ್ಲಾ ಮಟ್ಟದ ಅಧಿಕಾರಿಗಳ ಮೇಲೆ ಅವರಗಳು ಎಸಗಿದ ಲೋಪದೋಷಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧೀಕಾರಿಗಳು ಅವರುಗಳ ಸೇವೆಯನ್ನು ನಿಯಂತ್ರಿಸುವ ಮೇಲಾಧಿಕಾರಿಗಳಿಗೆ ಅವರುಗಳ ಮೇಲೆ ಶಿಸ್ತಿನ ಕ್ರಮ ಜರುಗಿಸುವ ಬಗ್ಗೆ ವರದಿ ಮಾಡಿ ಪ್ರತಿಯನ್ನು ಸಂಬಧಪಟ್ಟ ವಿಭಾಗಾಧಿಕಾರಿಗಳಿಗೆ ಕಳುಹಿಸಿಕೊಡಬೇಕು ಹಾಗೂ ನಿಯಂತ್ರಣಾಧಿಕಾರಿಗಳು ಕೂಡಲೆ ಶಿಸ್ತಿನ ಕ್ರಮ ಕೈಗೊಂಡ ಬಗ್ಗೆ ಖಚಿತಪಡಿಸಿ ಕೊಳ್ಳಬೇಕು. ನಿಯಂತ್ರಣಾಧಿಕಾರಿಗಳು ಶಿಸ್ತಿನ ಕ್ರಮ ಕೈಗೊಂಡ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ವಿಭಾಗಾಧಿಕಾರಿಗಳು ಸತತವಾಗಿ ಒತ್ತಾಯಿಸುವುದು.

3. ಹಲವಾರು ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ಕೆ.ಡಿ.ಪಿ ತ್ರೈಮಾಸಿಕ ಪರಿಶೀಲನಾ ಸಮಿತಿಗಳ ಸಭೆಗಳು ಕಾಲಕಾಲಕ್ಕೆ ನಡೆಯುತ್ತಿಲ್ಲ ವೆಂದು, ಅನೇಕ ತಾಲ್ಲೂಕು ಮಟ್ಟದ ಇಲಾಖೆಗಳ: ಸಂಸ್ಥೆಗಳ ಮುಖ್ಯಸ್ಥರುಗಳ ಈ ಸಭೆಗಳಿಗೆ ಹಾಜರಾಗುತ್ತಿಲ್ಲವೆಂದು ಹಾಗೂ ಸಭೆಗಳಿಗೆ ಬೇಕಾದ ಮಾಹಿತಿಯನ್ನು ಒದಗಿಸುತ್ತಿಲ್ಲವೆಂದೂ ಸಹ ದೂರುಗಳು ಬಂದಿವೆ. ಈ ಸಮಿತಿಗಳ ಸದಸ್ಯ ಕಾರ್ಯದರ್ಶಿಗಳಾಗಿರುವ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸಭೆಗಳನ್ನು ಕಾಲಕಾಲಕ್ಕೆ ಸತತವಾಗಿ ನಡೆಸಬೇಕು, ಒಂದು ವೇಳೆ ಈ ಸಭೆಗಳನ್ನು ನಿಯತಕಾಲಿಕವಾಗಿ ನಡೆಸದೇ ಇದ್ದ ಪಕ್ಷದಲ್ಲಿ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅವರುಗಳ ಮೇಲೆ ಕೂಡಲೇ ಶಿಸ್ತಿನ

ಕ್ರಮವನ್ನು ಕೈಗೊಳ್ಳಬೇಕು. ಎಲ್ಲಾ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳು ಈ ಸಭೆಗಳಿಗೆ ಹಾಜರಾಗಿ ಸಭೆಗೆ ಬೇಕಾದ ಮಾಹಿತಿಯನ್ನು ತಪ್ಪದೇ ಒದಗಿಸಬೇಕು. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ತಮ್ಮ ನಿಯಂತ್ರಣದಲ್ಲಿ ಬರುವ ಮೇಲಿನ ಸೂಚನೆಗಳನ್ನು ಪಾಲಿಸದೇ ಇರುವ ತಾಲ್ಲೂಕು ಮಟ್ಟದ ಅಧಿಕಾರಿಗಳ ಮೇಲೆ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಸಲ್ಲಿಸುವ ವರದಿಗಳ ಆಧಾರದ ಮೇಲೆ ಶಿಸ್ತಿನ ಕ್ರಮವನ್ನು ಜರೂಗಿಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅವರುಗಳ ಸೇವೆಯನ್ನು ನಿಯಂತ್ರಿಸುವ ಮೇಲಾಧಿಕಾರಿಗಳಿಗೆ ವರದಿ ಮಾಡಿ ಪ್ರತಿಯನ್ನು ವಿಭಾಗಾಧಿಕಾರಿಗಳಿಗೆ ಕಳುಹಿಸಿಕೊಡಬೇಕು. ನಿಯಂತ್ರಣಾಧಿಕಾರಿಗಳು ಶಿಸ್ತಿನ ಕ್ರಮ ತೆಗೆದುಕೊಳ್ಳುವ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ವಿಭಾಗಾಧಿಕಾರಿಗಳು ನಿಯಂತ್ರಣಾಧಿಕಾರಿ ಗಳನ್ನು ಸತತವಾಗಿ ಒತ್ತಾಯಿಸಬೇಕು.

4. ಮೇಲಿನ ಸೂಚನೆಗಳನ್ನು ಪಾಲಿಸುವುದರಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ವಿಭಾಗಾಧಿಕಾರಿಗಳು ಲೋಪವೆಸಗಿದ್ದೇ ಆದರೆ ಅದನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸುತ್ತದೆ.

(ತೆರೆಸಾ ಭಟ್ಟಾಚಾರ್ಯ)
ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ